ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸ್ವಾಮ್ಯಕ್ಕೆ ಒಳಪಟ್ಟಿದೆ)
ಸಹಾಯಕ ಕಾರ್ಯನಿರ್ವಾಹಕ
ಇಂಜಿನಿಯರ್(ವಿ) ರವರ ಕಛೇರಿ,
ಕಾ ಮತ್ತು ಪಾ ಉಪವಿಭಾಗ, ಹೂಟಗಳ್ಳಿ,
ಚಾ.ವಿ.ಸ.ನಿ.ನಿ., ಮೈಸೂರು.
ದೂರವಾಣಿ: 0821-2404922

CHAMUNDESHWARI
ELECTRICITY SUPPLY
CORPORATION LIMITED
(A GOVERNMENT OF KARNATAKA UNDERTAKING)
Office of the Asst.Executive
Engineer(Elc.)., O&M Sub Division,
Hootagally, CESC,
Mysuru.
Web Site: www.cescmysore.org
E-mail ID: aeehtgmys@gmail.com

Company Identity Number|CIN|:- U40109KA2004SGCO35177

ಕ್ರಮಾಂಕ: ಸಕಾನಿಇಂ(ವಿ)/ಸಇಂ(ತಾ)/ಹೂ-ಉವಿ/2020-21/3235-36 ದಿನಾಂಕ: 20.02.2021
24
ಲಗತ್ತು:

# ಸಭಾ ನಡಾವಳಿ

ಹೂಟಗಳ್ಳಿ ಉಪವಿಭಾಗದಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರ ಅಧ್ಯಕ್ಷತೆಯಲ್ಲಿ ದಿನಾಂಕ : 18.02.2021 ರಂದು ಬೆಳಿಗ್ಗೆ 11:00 ಗಂಟೆಗೆ ಜನ ಸಂಪರ್ಕ ಸಭೆಯನ್ನು ವಿದ್ಯುತ್ ಸಂಬಂಧಿತ ದೂರುಗಳು/ಕುಂದುಕೊರತೆಗಳ ಕುರಿತು ನಡೆದ ಸಭಾ ನಡಾವಳಿ.

**ಸಭೆಗೆ ಹಾಜರಿದ್ದ ಅಧಿಕಾರಿ/ನೌಕರರು :-**

1. ಶ್ರೀಯುತ ಚಿಕ್ಕಸಿದ್ದೇಗೌಡರು ರವರು, ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ, ವಿ.ವಿ.ಮೊಹಲ್ಲಾ ವಿಭಾಗ, ಚಾ.ವಿ.ಸ.ನಿ.ನಿ, ಮೈಸೂರು.
2. ಶ್ರೀ. ಲಕ್ಷ್ಮೀಶ ಕೆ.ಕೆ., ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಚಾ.ವಿ.ಸ.ನಿ.ನಿ., ಹೂಟಗಳ್ಳಿ ಉಪವಿಭಾಗ, ಮೈಸೂರು.
3. ಶ್ರೀ ಮಂಜು ಕೆ, ಸಹಾಯಕ ಇಂಜಿನಿಯರ್(ತಾ), ಚಾ.ವಿ.ಸ.ನಿ.ನಿ, ಹೂಟಗಳ್ಳಿ ಉಪವಿಭಾಗ, ಮೈಸೂರು
4. ಶ್ರೀ ಮಂಜುನಾಥ.ಎಸ್, ಸಹಾಯಕ ಇಂಜಿನಿಯರ್(ತಾ), ಚಾ.ವಿ.ಸ.ನಿ.ನಿ, ಹೂಟಗಳ್ಳಿ ಶಾಖೆ, ಮೈಸೂರು
5. ಶ್ರೀ ಶಿವಪ್ರಸಾದ್, ಸಹಾಯಕ ಇಂಜಿನಿಯರ್(ವಿ), ರೂಪನಗರ ಶಾಖೆ
6. ಶ್ರೀ ಕೇಶವಮೂರ್ತಿ, ಸಹಾಯಕ ಇಂಜಿನಿಯರ್(ವಿ), ಇಲವಾಲ ಶಾಖೆ
7. ಶ್ರೀ ರಾಘವೇಂದ್ರ, ಕಿರಿಯ ಇಂಜಿನಿಯರ್(ವಿ), ಬೀರಿಹುಂಡಿ ಶಾಖೆ
8. ಶ್ರೀಮತಿ ಎಸ್.ಶಿಲ್ಪ, ಹಿರಿಯ ಸಹಾಯಕಿ, ಹೂಟಗಳ್ಳಿ ಉಪವಿಭಾಗ, ಮೈಸೂರು

**ಸಭೆಗೆ ಹಾಜರಿದ್ದ ಜನರು :**

1. ಶ್ರೀ ನಂದನ್ ಕೆ.ಜೆ, # 563/1, ಕೆ.ಆರ್.ಎಸ್ ರಸ್ತೆ, ಹೂಟಗಳ್ಳಿ ಗ್ರಾಮ, ಮೈಸೂರು

*********

ಸಭೆಯಲ್ಲಿ ಉಪಸ್ಥಿತರಿದ್ದಂತಹ ಎಲ್ಲಾ ಅಧಿಕಾರಿ ಹಾಗೂ ನೌಕರರನ್ನು ಮತ್ತು ಸಭೆಯಲ್ಲಿ ಉಪಸ್ಥಿತರಿದ್ದ ಜನರನ್ನು ಸ್ವಾಗತಿಸಿ ಸಭೆ ಪ್ರಾರಂಭಿಸಲಾಯಿತು. ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರು ವಿದ್ಯುತ್ ಜನ ಸಂಪರ್ಕ ಸಭೆಯ ಮಹತ್ವದ ಬಗ್ಗೆ ತಿಳಿಸುತ್ತಾ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ನಿರ್ದೇಶನದನ್ವಯ ಪ್ರತಿ 3 ತಿಂಗಳಿಗೊಮ್ಮೆ ಉಪವಿಭಾಗ ಮಟ್ಟದಲ್ಲಿ ಜನಸಂಪರ್ಕ ಸಭೆಯನ್ನು ನಡೆಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ದಿನಾಂಕ : 15.12.2020 ರಂದು ನಡೆದ ಸಭೆಯಲ್ಲಿ ಸ್ವೀಕರಿಸಿದ ದೂರುಗಳು : 1

ದಿನಾಂಕ : 20.02.2021 ರಂದು ಸ್ವೀಕೃತವಾದ ದೂರಿನ ಸಂಖ್ಯೆ : ---

...2...

Scanned by TapScanner

ದಿನಾಂಕ : 15.12.2020 ರಂದು ಹೂಟಗಳ್ಳಿ ಉಪವಿಭಾಗದಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರ ಅಧ್ಯಕ್ಷತೆಯಲ್ಲಿ ನಡೆದ ಜನ ಸಂಪರ್ಕ ಸಭೆಯ ಗ್ರಾಹಕರ ವಿದ್ಯುತ್ ಸಂಬಂಧಿತ ದೂರುಗಳು/ಕುಂದುಕೊರತೆಗಳ ಬಗ್ಗೆ ಕುಲಂಕುಷವಾಗಿ ಪರಿಶೀಲಿಸಿ ತೆಗೆದುಕೊಂಡ ಕ್ರಮದ ಬಗ್ಗೆ ಕೆಳಕಂಡಂತೆ ವಿವರಿಸಿದರು.

| ಕ್ರ.ಸಂ. | ಅರ್ಜಿದಾರರ ಹೆಸರು, ವಿಳಾಸ ಮತ್ತು ದೂರವಾಣಿ ಸಂಖ್ಯೆ | ವಿಷಯ | ಕ್ರಮ |
|---|---|---|---|
| 1. | ಶ್ರೀ ರಾಘವೇಂದ್ರ, ಹುಯಿಲಾಳು ಗ್ರಾಮ, ಮೈಸೂರು | ▪ ಹುಯಿಲಾಳು ಗ್ರಾಮದ ಕುಡಿಯುವ ನೀರಿನ ಸಂಪರ್ಕಕ್ಕೆ ಅಳವಡಿಸಿರುವ 25ಕೆ.ವಿ.ಎ ಪರಿವರ್ತಕ ಓವರ್‌ಲೋಡ್ ಆಗಿರುವುದರಿಂದ ಉಂಟಾಗುತಿರುವ ಸಮಸ್ಯೆಯ ಬಗ್ಗೆ ತಿಳಿಸಿದರು. | ▪ ಕಿರಿಯ ಇಂಜಿನಿಯರ್(ವಿ), ಬೀರಿಹುಂಡಿ ಶಾಖೆ ರವರು ಉತ್ತರಿಸಿ, ಅಂದಾಜು ಪಟ್ಟಿಯನ್ನು ಸಿದ್ದಪಡಿಸಲಾಗಿದೆ ಎಂದರು. |

ದಿನಾಂಕ : 18.02.2021 ರಂದು ನಡೆದ ಸಭೆಯಲ್ಲಿ ಸ್ವೀಕರಿಸಿದ ಅಹವಾಲುಗಳು ಈ ಕೆಳಕಂಡಂತ್ತಿರುತ್ತದೆ.

| ಕ್ರ.ಸಂ. | ಅರ್ಜಿದಾರರ ಹೆಸರು, ವಿಳಾಸ ಮತ್ತು ದೂರವಾಣಿ ಸಂಖ್ಯೆ | ವಿಷಯ | ಕ್ರಮ |
|---|---|---|---|
| 1. | ನಂದನ್ ಕೆ.ಜಿ, # 563/1, ಕೆ.ಆರ್.ಎಸ್ ರಸ್ತೆ, ಹೂಟಗಳ್ಳಿ ಗ್ರಾಮ, ಮೈಸೂರು | ▪ ಇವರು ತಮ್ಮ ನಿವೇಶನದ ಮುಂಭಾಗ ಇರುವ ವಿದ್ಯುತ್ ಪರಿವರ್ತಕವನ್ನು ಸ್ಥಳಾಂತರಿಸಲು ಕೋರಿದರು. | ▪ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರು ಉತ್ತರಿಸಿ, ವಿದ್ಯುತ್ ಪರಿವರ್ತಕವನ್ನು ಸ್ಥಳಾಂತರಿಸಲು ಸ್ವಯಂ ನಿರ್ವಹಣ ಕಾಮಗಾರಿಯಡಿಯಲ್ಲಿ ನಿರ್ವಹಿಸಲು ಅಂದಾಜುಪಟ್ಟಿಯನ್ನು ಸಿದ್ದಪಡಿಸುವಂತೆ ಇಲಾಖಾ ಶಾಖಾಧಿಕಾರಿಯವರಿಗೆ ಸೂಚಿಸಿದರು. |



Scanned by TapScanner

ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರು ಮಾತನಾಡಿ, ಗ್ರಾಹಕರು ಈ ಸಭೆಯಲ್ಲಿ ದಾಖಲಿಸಿದ ದೂರುಗಳನ್ನು ಆದ್ಯತೆ ಮೇರೆಗೆ ಬಗೆಹರಿಸಲು ತಿಳಿಸಿ, ಭಾಗವಹಿಸಿದ ಗ್ರಾಹಕರಿಗೆ ಹಾಗೂ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಗಳನ್ನು ಸಲ್ಲಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

24/02

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ),
ಸೆಸ್ಕ್, ಹೂಟಗಳ್ಳಿ ಉಪವಿಭಾಗ,
ಮೈಸೂರು.

ಪ್ರತಿಯನ್ನು :

1. ಅಧೀಕ್ಷಕ ಇಂಜಿನಿಯರ್(ವಿ), ಸೆಸ್ಕ್, ಕಾ ಮತ್ತು ಪಾ ವಿಭಾಗ, ಜೋಡಿ ಬಸವೇಶ್ವರ ರಸ್ತೆ, ಕುವೆಂಪುನಗರ, ಮೈಸೂರು ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
2. ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಚಾ.ವಿ.ಸ.ನಿ.ನಿ, ಕಾ ಮತ್ತು ಪಾ ವಿಭಾಗ, ವಿ.ವಿ.ಮೊಹಲ್ಲಾ, ಮೈಸೂರು ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
3. ಕಛೇರಿ ಪ್ರತಿ

Scanned by TapScanner